# ಕರ್ನಾಟಕ ವಿಧಾನ ಪರಿಷತ್ತು

**ನೂರ ಮೂವತ್ತೆರಡನೆಯ ಅಧಿವೇಶನ**

**ಕಾರ್ಯಕಲಾಪಗಳ ಪಟ್ಟಿ**

**ಶನಿವಾರ, ದಿನಾಂಕ: 03ನೇ ಡಿಸೆಂಬರ್, 2016**
**(ಸಮಯ: ಬೆಳಗ್ಗೆ 11.00 ಗಂಟೆಗೆ)**

******

## 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಆರನೆಯ ಪಟ್ಟಿ

ಆ) **ತಡೆಹಿಡಿಯಲಾದ ಪ್ರಶ್ನೆ:**
1) 7ನೇ ಪಟ್ಟಿಯಿಂದ ಶ್ರೀಮತಿ ಮೋಟಮ್ಮ , ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 92(827)
2) 7ನೇ ಪಟ್ಟಿಯಿಂದ ಶ್ರೀ ಮಾನೆ ಶ್ರೀನಿವಾಸ್, ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 104(830)
} **ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು**

ಇ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಆರನೆಯ ಪಟ್ಟಿ

## 02. ಮಹದಾಯಿ ಹಾಗೂ ಕಳಸಾ ಬಂಡೂರಿ ಯೋಜನೆಗಳ ನೀರಿನ ಸಮಸ್ಯೆಗಳ ಮೇಲಿನ ಮುಂದುವರೆದ ಚರ್ಚೆ ಹಾಗೂ ಸರ್ಕಾರದಿಂದ ಉತ್ತರ.

## 03. ನಿಯಮ 68ರಡಿಯಲ್ಲಿ ಸಾರ್ವಜನಿಕ ಮಹತ್ವದ ಜರೂರು ವಿಷಯದ ಮೇಲೆ ಚರ್ಚೆ

**ಶ್ರೀಯುತರುಗಳಾದ: ಕೆ.ಎಸ್. ಈಶ್ವರಪ್ಪ, ಮಾನ್ಯ ವಿರೋಧ ಪಕ್ಷದ ನಾಯಕರು, ಕ್ಯಾಪ್ಟನ್ ಗಣೇಶ್ ಕಾರ್ಣಿಕ್, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು ಹಾಗೂ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರುಗಳಾದ: ಸೋಮಣ್ಣ ಮ. ಬೇವಿನ ಮರದ, ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ ಮತ್ತು ಬಸನಗೌಡ ಆರ್. ಪಾಟೀಲ್** ಅವರುಗಳು ಬರಗಾಲದ ಪರಿಸ್ಥಿತಿಯಿಂದಾಗಿ ಕಬ್ಬು ಬೆಳೆಗಾರರ ಆತ್ಮಹತ್ಯೆ, ಕಾರ್ಖಾನೆಗಳಿಂದ ಬಾಕಿ ಪಾವತಿಸಲು ವಿಳಂಬ ಹಾಗೂ ಇತ್ಯಾದಿ ಸಮಸ್ಯೆಗಳ ಬಗ್ಗೆ ಪ್ರಸ್ತಾಪಿಸುವುದು.

..2

## 04. ಗಮನ ಸೆಳೆಯುವ ಸೂಚನೆಗಳು

**ಅ) ಶ್ರೀ ಬಸವರಾಜ ಹೊರಟ್ಟಿ** ಅವರು ಹಂಪಿ ಕನ್ನಡ ವಿಶ್ವವಿದ್ಯಾಲಯದ ಜಾಗವನ್ನು ಕಾನೂನು ಬಾಹಿರವಾಗಿ ಅತಿಕ್ರಮಣ ಮಾಡಿ ರೆಸಾರ್ಟ್‌ಗಳನ್ನು ನಿರ್ಮಾಣ ಮಾಡುತ್ತಿರುವ ಬಗ್ಗೆ **ಮಾನ್ಯ ಉನ್ನತ ಶಿಕ್ಷಣ ಸಚಿವರ** ಗಮನ ಸೆಳೆಯುವುದು.

**ಆ) ಶ್ರೀಯುತರುಗಳಾದ: ಹಣಮಂತ ರುದ್ರಪ್ಪ ನಿರಾಣಿ ಹಾಗೂ ರಾಮಚಂದ್ರ ಗೌಡ** ಅವರುಗಳು ಸವದತ್ತಿ-ಶಿರಸಂಗಿ-ರಾಮದುರ್ಗ ರಸ್ತೆಯ ನಿರ್ಮಾಣ ಕಾರ್ಯವನ್ನು ತೀವ್ರಗತಿಯಲ್ಲಿ ಮುಗಿಸುವ ಬಗ್ಗೆ **ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರ** ಗಮನ ಸೆಳೆಯುವುದು.

**ಇ) ಶ್ರೀ ಅರುಣ ಶಹಾಪುರ** ಅವರು ಖಾಸಗಿ ಅನುದಾನಿತ ಶಿಕ್ಷಣ ಸಂಸ್ಥೆಗಳ ಪದವಿ ಕಾಲೇಜುಗಳಲ್ಲಿ ಖಾಲಿ ಇರುವ ಹುದ್ದೆಗಳ ಭರ್ತಿಗೆ ಕ್ರಮಕೈಗೊಳ್ಳುವ ಕುರಿತು **ಮಾನ್ಯ ಉನ್ನತ ಶಿಕ್ಷಣ ಸಚಿವರ** ಗಮನ ಸೆಳೆಯುವುದು.

**ಈ) ಶ್ರೀಯುತರುಗಳಾದ: ಎಸ್.ವ್ಹಿ. ಸಂಕನೂರ, ಕೆ.ಟಿ. ಶ್ರೀಕಂಠೇಗೌಡ, ಎನ್. ಅಪ್ಪಾಜಿ ಗೌಡ ಹಾಗೂ ಇತರರು** ಎಐಸಿಟಿಇ ವೇತನದ ಮೂಲಕ ನೇಮಕವಾಗಿರುವ ಸಹಾಯಕ ಪ್ರಾಧ್ಯಾಪಕರುಗಳಿಗೆ ಪದನಾಮ ಬದಲೀಕರಣ ಮಾಡಿ ಮಾನ್ಯ ಉಚ್ಚ ನ್ಯಾಯಾಲಯದ ತೀರ್ಪಿನ್ನು ಅನುಷ್ಠಾನಗೊಳಸದಿರುವ ಹಾಗೂ ವೇತನವನ್ನು ನಿಗದಿಪಡಿಸದಿರುವ ಬಗ್ಗೆ **ಮಾನ್ಯ ಉನ್ನತ ಶಿಕ್ಷಣ ಸಚಿವರ** ಗಮನ ಸೆಳೆಯುವುದು.

**ಉ) ಶ್ರೀ ರಿಜ್ವಾನ್ ಅರ್ಷದ್** ಅವರು ಬೆಂಗಳೂರು ನಗರದ ಕೆ.ಆರ್. ಮಾರುಕಟ್ಟೆಯಲ್ಲಿನ ಬೇಸಿಗೆ ಅರಮನೆ ಸುತ್ತಮುತ್ತ ಮೆಟ್ರೋ ಕಾಮಗಾರಿ, ರಸ್ತೆ ಅಗಲೀಕರಣ ಮತ್ತು ಖಾಸಗಿ ಕಟ್ಟಡ ಕಟ್ಟುವ ಸಂದರ್ಭದಲ್ಲಿ ಭೂಮಿಯೊಳಗೆ ಆಗಾಗ್ಗೆ ದೊರಕುತ್ತಿರುವ **'ಟಿಪ್ಪು ಸುಲ್ತಾನ್'** ಕಾಲದ ಫಿರಂಗಿಗಳು ಹಾಗೂ ಮದ್ದು-ಗುಂಡುಗಳನ್ನು ಸಂರಕ್ಷಿಸುವ ಬಗ್ಗೆ **ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ** ಗಮನ ಸೆಳೆಯುವುದು.

## 05. ನಿಯಮ ೩೩೦ರ ಮೇರೆಗೆ

**ಅ) ಶ್ರೀಯುತರುಗಳಾದ: ಕೆ.ಎಸ್. ಈಶ್ವರಪ್ಪ, ಮಾನ್ಯ ವಿರೋಧ ಪಕ್ಷದ ನಾಯಕರು, ಕ್ಯಾಪ್ಟನ್ ಗಣೇಶ್ ಕಾರ್ಣಿಕ್, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು ಹಾಗೂ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರುಗಳಾದ: ಕೆ.ಬಿ. ಶಾಣಪ್ಪ, ಎಸ್.ವ್ಹಿ. ಸಂಕನೂರ ಹಾಗೂ ಪ್ರದೀಪ್ ಶೆಟ್ಟರ್** ಅವರುಗಳು ಕಪ್ಪತ್ತಗುಡ್ಡ ಮೀಸಲು ಅರಣ್ಯ ಪ್ರದೇಶವನ್ನು "ಕಪ್ಪತ್ತಗುಡ್ಡ ಸಂರಕ್ಷಣಾ ಮೀಸಲು ಪ್ರದೇಶವನ್ನಾಗಿ ಅಧಿಸೂಚನೆ ಸಂಖ್ಯೆ: ಅಪಜೀ.291:ಎಫ್‌ಡಬ್ಲ್ಯೂಎಲ್/2015, ದಿನಾಂಕ: 19.12.2015ರಲ್ಲಿ ಘೋಷಿಸಿದ್ದು, ನಂತರ ಸದರಿ ಆದೇಶವನ್ನು ಹಿಂಪಡೆದಿರುವ ಬಗ್ಗೆ ಪ್ರಸ್ತಾಪಿಸುವುದು. **(ಮಾನ್ಯ ಅರಣ್ಯ ಸಚಿವರು)**

**ಆ) ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ)** ಅವರು ರಾಜ್ಯ ಸರ್ಕಾರದ ಅಂಗ ಸಂಸ್ಥೆಗಳಾದ ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮ ಮತ್ತು ವಿದ್ಯುತ್ ಮಗ್ಗ ಅಭಿವೃದ್ಧಿ ನಿಗಮಗಳ ಮೂಲಕ ವಿದ್ಯಾವಿಕಾಸ ಯೋಜನೆಯಡಿಯಲ್ಲಿ ರಾಜ್ಯದ ಎಲ್ಲಾ ಶಾಲಾ ಮಕ್ಕಳಿಗೆ ನೀಡಲಾಗುತ್ತಿದ್ದ ಸಮವಸ್ತ್ರ ಸರಬರಾಜನ್ನು ಕಡಿತಗೊಳಿಸಿ ಕೇವಲ ಬೆಳಗಾವಿ ವಿಭಾಗದ ಕೆಲವು ಜಿಲ್ಲೆಗಳಿಗೆ ಮಾತ್ರ ಸೀಮಿತಗೊಳಿಸಿರುವ ಹಾಗೂ ಶಿಕ್ಷಣ ಇಲಾಖೆಯು ಅವೈಜ್ಞಾನಿಕವಾಗಿ ದರ ಕಡಿಮೆ ಮಾಡಿರುವುದರಿಂದ, ವಿದ್ಯುತ್ ಮಗ್ಗ ನೇಕಾರರು ಕಂಗಾಲಾಗಿ ಉದ್ಯೋಗವನ್ನು ತೊರೆದು ವಲಸೆ ಹೋಗುವಂತಹ ಪರಿಸ್ಥಿತಿ ನಿರ್ಮಾಣವಾಗಿರುವ ಕುರಿತು ಸದನದಲ್ಲಿ ಪ್ರಸ್ತಾಪಿಸುವುದು. **(ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು)**

**ಇ) ಶ್ರೀ ಬಸವರಾಜ ಹೊರಟ್ಟಿ** ಅವರು ಸರ್ಕಾರಿ ಇಲಾಖೆಗಳಲ್ಲಿ ಹಾಗೂ ಸ್ಥಳೀಯ ಸಂಸ್ಥೆಗಳಲ್ಲಿ ದಿನಗೂಲಿ ಮೇಲೆ ಸೇವೆ ಸಲ್ಲಿಸುತ್ತಿರುವ ನೌಕರರ ಸೇವಾ ಭದ್ರತೆಗಾಗಿ ತಂದಿರುವ ಕರ್ನಾಟಕ ದಿನಗೂಲಿ ನೌಕರರ ಕ್ಷೇಮಾಭಿವೃದ್ಧಿ ಅಧಿನಿಯಮ 2012 ಹಾಗೂ ನಿಯಮಗಳು 2013ರಲ್ಲಿ ತಿಳಿಸಿರುವ ರೀತ್ಯಾ ಅರ್ಹ ದಿನಗೂಲಿ ನೌಕರರಿಗೆ ಎಲ್ಲಾ ಸೌಲಭ್ಯಗಳನ್ನು ಮಂಜೂರು ಮಾಡುವ ಬಗ್ಗೆ ಪ್ರಸ್ತಾಪಿಸುವುದು. **(ಮಾನ್ಯ ಮುಖ್ಯಮಂತ್ರಿಗಳು)**

**ಶ್ರೀನಿವಾಸ**
**ಕಾರ್ಯದರ್ಶಿ**

---

ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
**www.kla.kar.nic.in/council.htm**